Akashvani: Bangalore

National Bulletin In Kannada

26.03.2026: 13.10hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

26.03.2026: 13.10hrs

********

**ಮುಖ್ಯಾಂಶಗಳು :**

1. ದೇಶದೆಲ್ಲಡೆ ಇಂದು ರಾಮನವಮಿ ಆಚರಣೆ; ರಾಮನ ಆದರ್ಶಗಳನ್ನು ಅನುಸರಿಸಲು ದೇಶದ ನಾಗರಿಕರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ
2. ಅಸ್ಸಾಂ, ಕೇರಳ, ಪುದುಚೇರಿ ಮತ್ತು ನಾಲ್ಕು ರಾಜ್ಯಗಳ ಉಪಚುನಾವಣೆಗೆ ನಾಮಪತ್ರ ಪರಿಶೀಲನೆ ಅಂತಿಮ
3. ಜಿ-೭ ವಿದೇಶಾಂಗ ಸಚಿವರ ಸಭೆಯಲ್ಲಿ ಪಾಲ್ಗೊಳ್ಳಲು ಸಚಿವ ಡಾ.ಎಸ್.ಜೈಶಂಕರ್ ಇಂದಿನಿಂದ ೨ ದಿನ ಫ್ರಾನ್ಸ್ ಪ್ರವಾಸ
4. ಆಂಧ್ರಪ್ರದೇಶದಲ್ಲಿ ಬಸ್ - ಟಿಪ್ಪರ್ ನಡುವೆ ಅಪಘಾತ: ಕನಿಷ್ಠ ೧೪ ಮಂದಿ ಸಾವು; ಪ್ರಧಾನಿ ನರೇಂದ್ರ ಮೋದಿ, ಆಂಧ್ರ ಮುಖ್ಯಮಂತ್ರಿ ಸಂತಾಪ, ಪರಿಹಾರ ಘೋಷಣೆ

*********

ಮರ್ಯಾದಾ ಪುರುಷೋತ್ತಮ ಭಗವಾನ್ ಶ್ರೀ ರಾಮನ ಜನ್ಮದಿನದ ಅಂಗವಾಗಿ ಇಂದು ದೇಶಾದ್ಯಂತ ರಾಮನವಮಿ ಆಚರಿಸಲಾಗುತ್ತಿದೆ.ಈ ಹಬ್ಬವು ಆಳವಾದ ಧಾರ್ಮಿಕ ಮತ್ತು ಸಾಂಸ್ಕೃತಿಕ ಮಹತ್ವವನ್ನು ಹೊಂದಿದೆ. ಭಗವಾನ್ ರಾಮನ ಜೀವನದಲ್ಲಿ ಸತ್ಯ, ನ್ಯಾಯ, ಸದ್ಗುಣ ಮತ್ತು ಕರ್ತವ್ಯದ ಆದರ್ಶಗಳನ್ನು ಅನುಸರಿಸಲು ಜನರನ್ನು ಈ ಹಬ್ಬವು ಪ್ರೇರೇಪಿಸುತ್ತದೆ.ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ರಾಮನವಮಿಯ ಅಂಗವಾಗಿ ನಾಗರಿಕರಿಗೆ ಶುಭಾಶಯಗಳನ್ನು ಕೋರಿದ್ದಾರೆ. ರಾಷ್ಟ್ರಪತಿ ತಮ್ಮ ಸಂದೇಶದಲ್ಲಿ, ಭಗವಾನ್ ರಾಮನ ಜೀವನ ಪ್ರಯಾಣವು ಅರ್ಥಪೂರ್ಣ ಜೀವನಕ್ಕಾಗಿ ಸತ್ಯ, ನ್ಯಾಯ ಮತ್ತು ಸದ್ಗುಣದ ಮಾರ್ಗವನ್ನು ಅನುಸರಿಸಲು ನಮಗೆ ಮಾರ್ಗದರ್ಶನ ನೀಡುತ್ತದೆ ಎಂದು ಹೇಳಿದ್ದಾರೆ.ಅವರ

ಜೀವನವು ಸಮಾಜದ ಬಗೆಗಿನ ನಮ್ಮ ಕರ್ತವ್ಯಗಳನ್ನು ನಿರ್ವಹಿಸಲು ನಮ್ಮನ್ನು ಪ್ರೇರೇಪಿಸುತ್ತದೆ ಮತ್ತು ಅವರ ಜೀವನದ ಆದರ್ಶಗಳು ನಮ್ಮ ಸಂಸ್ಕೃತಿಯ ಅಡಿಪಾಯವಾಗಿವೆ ಮತ್ತು ನಾವು ಅವುಗಳಿಗೆ ಅನುಗುಣವಾಗಿ ಬದುಕಲು ಶ್ರಮಿಸಬೇಕು ಎಂದು ಅವರು ಹೇಳಿದ್ದಾರೆ. ಭಗವಾನ್ ರಾಮನ ಆದರ್ಶಗಳು ಭಾರತೀಯ ಸಂಸ್ಕೃತಿಯ ಅಡಿಪಾಯವನ್ನು ರೂಪಿಸುತ್ತವೆ. ಚಿಂತನೆ, ಮಾತು ಮತ್ತು ಕ್ರಿಯೆಯಲ್ಲಿ ಸಮರ್ಪಣಾ ಭಾವದಿಂದ ರಾಷ್ಟ್ರ ಸೇವೆ ಮಾಡುವ ಪ್ರತಿಜ್ಞೆಯನ್ನು ತೆಗೆದುಕೊಳ್ಳುವಂತೆ ರಾಷ್ಟ್ರಪತಿಗಳು ಜನರಿಗೆ ಕರೆ ನೀಡಿದ್ದಾರೆ.

*********

ಅಸ್ಸಾಂ, ಕೇರಳ, ಪುದುಚೇರಿ ಮತ್ತು ಏಪ್ರಿಲ್ ೯ ರಂದು ನಡೆಯಲಿರುವ ನಾಲ್ಕು ರಾಜ್ಯಗಳ ಉಪಚುನಾವಣೆಯ ನಾಮಪತ್ರಗಳ ಪರಿಶೀಲನೆಯನ್ನು ಚುನಾವಣಾ ಆಯೋಗ ಪೂರ್ಣಗೊಳಿಸಿದೆ. ಅಸ್ಸಾಂನ ೭೮೯ ಅಭ್ಯರ್ಥಿಗಳು, ಕೇರಳದ ೯೮೫ ಮತ್ತು ಪುದುಚೇರಿಯ ೩೬೬ ಅಭ್ಯರ್ಥಿಗಳು ಸೇರಿದಂತೆ ಎರಡು ಸಾವಿರದ ೧೪೦ ಅಭ್ಯರ್ಥಿಗಳು ಪರಿಶೀಲನೆಯ ನಂತರ ಕಣದಲ್ಲಿದ್ದಾರೆ ಎಂದು ಚುನಾವಣಾ ಆಯೋಗ ಹೇಳಿಕೆಯಲ್ಲಿ ತಿಳಿಸಿದೆ. ಗೋವಾದಿಂದ ಮೂವರು ಅಭ್ಯರ್ಥಿಗಳು, ಕರ್ನಾಟಕದಿಂದ ೫೦ ಅಭ್ಯರ್ಥಿಗಳು, ನಾಗಾಲ್ಯಾಂಡ್ ನಿಂದ ಏಳು ಮತ್ತು ತ್ರಿಪುರಾದಿಂದ ಆರು ಅಭ್ಯರ್ಥಿಗಳು ಸೇರಿದಂತೆ ನಾಲ್ಕು ರಾಜ್ಯಗಳ ಉಪಚುನಾವಣೆಯಲ್ಲಿ ೬೬ ಅಭ್ಯರ್ಥಿಗಳು ಸ್ಪರ್ಧಿಸಲಿದ್ದಾರೆ. ಅಭ್ಯರ್ಥಿಗಳು ಇಂದು ಮಧ್ಯಾಹ್ನ ೩ ಗಂಟೆಯಒಳಗೆ ನಾಮಪತ್ರ ವಾಪಸ್ ಪಡೆಯಬಹುದು.

*********

ಪಾಲುದಾರ ರಾಷ್ಟ್ರಗಳೊಂದಿಗೆ ಜಿ-೭ ವಿದೇಶಾಂಗ ಸಚಿವರ ಸಭೆಯಲ್ಲಿ ಭಾಗವಹಿಸಲು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಇಂದಿನಿಂದ ಎರಡು ದಿನಗಳ ಫ್ರಾನ್ಸ್ ಪ್ರವಾಸ ಕೈಗೊಳ್ಳಲಿದ್ದಾರೆ. ಅಬ್ಬೆ ಡೆಸ್-ವಾಕ್ಸ್-ಡಿ-ಸೆರ್ನೆಯಲ್ಲಿ ನಡೆಯಲಿರುವ ಜಿ-೭ ವಿದೇಶಾಂಗ ಸಚಿವರ ಸಭೆಯ ನೇಪಥ್ಯದಲ್ಲಿ ಡಾ.ಜೈಶಂಕರ್ , ತಮ್ಮ ಸಹವರ್ತಿಗಳೊಂದಿಗೆ ದ್ವಿಪಕ್ಷೀಯ ಚರ್ಚೆ ನಡೆಸುವ ನಿರೀಕ್ಷೆಯಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

*********

ಆಂಧ್ರಪ್ರದೇಶದ ಮಾರ್ಕಾಪುರಂ ಜಿಲ್ಲೆಯ ರಾಯವರಂ ಬಳಿ ಖಾಸಗಿ ಟ್ರಾವೆಲ್ ಬಸ್ ಮತ್ತು ಟಿಪ್ಪರ್ ಟ್ರಕ್ ನಡುವೆ ಡಿಕ್ಕಿ ಹೊಡೆದ ಪರಿಣಾಮ ಇಂದು ಮುಂಜಾನೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ೧೪ ಜನರು ಮೃತಪಟ್ಟಿದ್ದಾರೆ ಎಂದು ಶಂಕಿಸಲಾಗಿದೆ. ಕ್ವಾರಿ ಸ್ಥಳದ ಬಳಿ ಅಪಘಾತ ಸಂಭವಿಸಿದ ಪರಿಣಾಮ ಕ್ಷಣಾರ್ಧದಲ್ಲಿ ಬೆಂಕಿ ಬಸ್ ಗೆ ಆವರಿಸಿದೆ. ಬಸ್ ಸಂಪೂರ್ಣವಾಗಿ ಸುಟ್ಟು ಕರಕಲಾಗಿದೆ. ಹಲವಾರು ಪ್ರಯಾಣಿಕರು ಒಳಗೆ ಸಿಕ್ಕಿಹಾಕಿಕೊಂಡು ಬೆಂಕಿಯಲ್ಲಿ ಸಜೀವ ದಹನವಾಗಿದ್ದಾರೆ  ಎಂದು ಪ್ರಾಥಮಿಕ ವರದಿಗಳು ತಿಳಿಸಿವೆ. ರಕ್ಷಣಾ ಮತ್ತು ಗುರುತಿಸುವಿಕೆ ಪ್ರಯತ್ನಗಳು ಮುಂದುವರೆದಿರುವುದರಿಂದ ಸಾವಿನ ಸಂಖ್ಯೆ  ಇನ್ನಷ್ಟು ಹೆಚ್ಚಾಗಬಹುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಗಾಯಗೊಂಡ ಕನಿಷ್ಠ ೨೦ ಪ್ರಯಾಣಿಕರನ್ನು ಚಿಕಿತ್ಸೆಗಾಗಿ ಹತ್ತಿರದ ಆಸ್ಪತ್ರೆಗಳಿಗೆ ಸ್ಥಳಾಂತರಿಸಲಾಗಿದೆ. ಘಟನೆ ನಡೆದ ಕೂಡಲೇ ಪೊಲೀಸರು ಮತ್ತು ತುರ್ತು ತಂಡಗಳು ಸ್ಥಳಕ್ಕೆ ತಲುಪಿ ರಕ್ಷಣಾ ಕಾರ್ಯಾಚರಣೆಯನ್ನು ಪ್ರಾರಂಭಿಸಿ, ಗಾಯಾಳುಗಳನ್ನು ಸ್ಥಳಾಂತರಿಸಿ ಪ್ರದೇಶವನ್ನು ಸುರಕ್ಷಿತಗೊಳಿಸಿದವು. ಅಪಘಾತದ ಸಮಯದಲ್ಲಿ ಖಾಸಗಿ ಟ್ರಾವೆಲ್ ಕಂಪನಿ ನಿರ್ವಹಿಸುತ್ತಿದ್ದ ಬಸ್ ಹೈದರಾಬಾದ್ ನಿಂದ ಪಮುರುವಿಗೆ ಪ್ರಯಾಣಿಸುತ್ತಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಘಟನೆಯ ಬಗ್ಗೆ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಆಘಾತ ವ್ಯಕ್ತಪಡಿಸಿದ್ದು, ಅಧಿಕಾರಿಗಳೊಂದಿಗೆ ಪರಿಸ್ಥಿತಿಯನ್ನು ಪರಿಶೀಲಿಸಿದರು. ಸೂಕ್ತ ಚಿಕಿತ್ಸೆಯನ್ನು ಖಚಿತಪಡಿಸಿಕೊಳ್ಳಲು ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು .ಇದೇ ವಳೆ ಸಮಗ್ರ ತನಿಖೆಗೆ ಆದೇಶಿಸಿದ್ದಾರೆ.ಏತನ್ಮಧ್ಯೆ, ಪ್ರಧಾನಿ ನರೇಂದ್ರ ಮೋದಿ ಘಟನೆಗೆ ಸಂತಾಪ ವ್ಯಕ್ತಪಡಿಸಿದ್ದು, ಮೃತ ಕುಟುಂಬಸ್ಥರಿಗೆ ತಲಾ ೨ ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ.

*********

ಇರಾನ್‌ನಲ್ಲಿ ನಡೆಯುತ್ತಿರುವ ಯುದ್ಧದ ಪರಿಸ್ಥಿತಿಯನ್ನು ಬಳಸಿಕೊಂಡು ಕೆಲವು ಜನರನ್ನು ಮೂಲಭೂತವಾದದತ್ತ ಪ್ರೇರೇಪಿಸಲು ಯತ್ನಿಸುತ್ತಿವೆ ಎಂಬ ಬಗ್ಗೆ ಕೇಂದ್ರ ಗೃಹ ಸಚಿವಾಲಯವು ಈಗಾಗಲೇ ಎಚ್ಚರಿಕೆ ನೀಡಿದೆ. ಇದರ ಬೆನ್ನಲ್ಲೇ ಈಗ ಗುಪ್ತಚರ ಇಲಾಖೆಯು ಚಾರಿಟಿ ಅಥವಾ ದಾನದ ಹೆಸರಿನಲ್ಲಿ ನಡೆಯುತ್ತಿರುವ ಜಾಗತಿಕ ಮಟ್ಟದ ವಂಚನೆಯ ಜಾಲದ ಬಗ್ಗೆ ಜನರಿಗೆ ಅರಿವು ಮೂಡಿಸಿದೆ.ಯುದ್ಧದಿಂದ ಸಂತ್ರಸ್ತರಾದ ಇರಾನ್ ಜನರ ಕಲ್ಯಾಣಕ್ಕಾಗಿ ಮತ್ತು ಅವರ

ಪುನರ್ವಸತಿಗಾಗಿ ಹಣ ಸಂಗ್ರಹಿಸುತ್ತಿದ್ದೇವೆ ಎಂಬ ನೆಪದಲ್ಲಿ ಅನೇಕ ಹೊಸ ಸಂಘಟನೆಗಳು ಮತ್ತು ಗುಂಪುಗಳು ದಿಢೀರನೆ ಹುಟ್ಟಿಕೊಂಡಿವೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಇವು ಮಾನವೀಯತೆಯ ಹೆಸರಿನಲ್ಲಿ ಸಾರ್ವಜನಿಕರಿಂದ ದೊಡ್ಡ ಮಟ್ಟದ ನಿಧಿಯನ್ನು ಸಂಗ್ರಹಿಸುತ್ತಿವೆ. ಇಂತಹ ಸಂಘಟನೆಗಳು ಯುದ್ಧದಂತಹ ತುರ್ತು ಸಂದರ್ಭಗಳಲ್ಲಿ ಮಾತ್ರ ಕಾಣಿಸಿಕೊಳ್ಳುತ್ತವೆ ಮತ್ತು ಸಾರ್ವಜನಿಕರಿಂದ ಹಣ ಲೂಟಿ ಮಾಡಿದ ತಕ್ಷಣ ಗುರುತು ಸಿಗದಂತೆ ಕಣ್ಮರೆಯಾಗುತ್ತವೆ. ಆದ್ದರಿಂದ ಯಾವುದೇ ವ್ಯಕ್ತಿ ಅಥವಾ ಸಂಸ್ಥೆಗೆ ದೇಣಿಗೆ ನೀಡುವ ಮುನ್ನ ಅದರ ವಿಶ್ವಾಸಾರ್ಹತೆಯನ್ನು ಕೂಲಂಕಷವಾಗಿ ಪರಿಶೀಲಿಸುವುದು ಅತ್ಯಗತ್ಯ ಎಂದು ಗುಪ್ತಚರ ಇಲಾಖೆ ತಿಳಿಸಿದೆ.

*********

ಸುಸ್ಥಿರ ಅಭಿವೃದ್ಧಿ ಮತ್ತು ಹವಾಮಾನ ನ್ಯಾಯಕ್ಕೆ ತನ್ನ ಬದ್ಧತೆಯನ್ನು ಬಲಪಡಿಸುವ ಜತೆಗೆ ಯುಎನ್ಎಫ್ ಸಿಸಿಸಿ ಮತ್ತು ಪ್ಯಾರಿಸ್ ಒಪ್ಪಂದದ ಅಡಿಯಲ್ಲಿ ದೇಶದ ಮಹತ್ವಾಕಾಂಕ್ಷೆಯನ್ನು ಹೆಚ್ಚಿಸುವ ಮೂಲಕ ೨೦೨೧ ರಿಂದ ೨೦೩೫ ರ ಅವಧಿಗೆ ಭಾರತದ ರಾಷ್ಟ್ರೀಯ ನಿರ್ಧರಿತ ಕೊಡುಗೆಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ.ಸಂಪುಟ ನಿರ್ಧಾರಗಳ ಬಗ್ಗೆ ಮಾಧ್ಯಮಗಳಿಗೆ ಮಾಹಿತಿ ನೀಡಿದ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಭಾರತವು ತನ್ನ ಜಿಡಿಪಿಯ ಹೊರಸೂಸುವಿಕೆಯ ತೀವ್ರತೆಯನ್ನು ೨೦೦೫ ರ ಮಟ್ಟದಿಂದ ೨೦೩೫ ರ ವೇಳೆಗೆ ಶೇಕಡ ೪೭ ರಷ್ಟು ಕಡಿಮೆ ಮಾಡಲು ಬದ್ಧವಾಗಿದೆ ಎಂದು ಹೇಳಿದರು.ದೇಶವು ಫೆಬ್ರವರಿ ೨೦೨೬ ರ ವೇಳೆಗೆ ಶೇಕಡ ೫೧.೫೭ ರಷ್ಟು ಪಳೆಯುಳಿಕೆಯೇತರ ಇಂಧನ ಸಾಮರ್ಥ್ಯವನ್ನು ಸಾಧಿಸಿದೆ. ನಿಗದಿತ ಸಮಯಕ್ಕಿಂತ ಐದು ವರ್ಷಗಳ ಮುಂಚಿತವಾಗಿ ಗುರಿಯನ್ನು ಯಶಸ್ವಿಯಾಗಿ ಪೂರೈಸಿದೆ. ೨೦೩೫ ರ ವೇಳೆಗೆ ಸಾಧಿಸಬೇಕಾದ ಸ್ಥಾಪಿತ ವಿದ್ಯುತ್ ಶಕ್ತಿ ಸಾಮರ್ಥ್ಯದಲ್ಲಿ ಪಳೆಯುಳಿಕೆಯೇತರ ಇಂಧನ ಆಧಾರಿತ ಇಂಧನ ಸಂಪನ್ಮೂಲಗಳ ಶೇಕಡ ೬೦ ರಷ್ಟು ಪಾಲನ್ನು ಸಾಧಿಸುವ ಮಹತ್ವಾಕಾಂಕ್ಷೆಯನ್ನು ಮತ್ತಷ್ಟು ಹೆಚ್ಚಿಸಲಾಗಿದೆ.

*********

ತೃತೀಯ ಲಿಂಗಿ ವ್ಯಕ್ತಿಗಳ ತಿದ್ದುಪಡಿ ಮಸೂದೆ - ೨೦೨೬ ಅನ್ನು ಸಂಸತ್ತು ಅಂಗೀಕರಿಸಿದ್ದು, ರಾಜ್ಯಸಭೆ ನಿನ್ನೆ ಅನುಮೋದನೆ ನೀಡಿದೆ. ಇದಕ್ಕೂ ಮುನ್ನ ಪ್ರತಿಪಕ್ಷಗಳು ಸದನದಿಂದ ಹೊರ ನಡೆದ ನಡುವೆಯು ಮಂಗಳವಾರ ಲೋಕಸಭೆಯಲ್ಲಿ ಧ್ವನಿ ಮತದ ಮೂಲಕ ಮಸೂದೆಯನ್ನು ಅಂಗೀಕರಿಸಲಾಗಿತ್ತು. ಮಸೂದೆಯು ತೃತೀಯ ಲಿಂಗಿಗಳ ವರ್ಗವನ್ನು ಮರು ವ್ಯಾಖ್ಯಾನಿಸಲು ಪ್ರಯತ್ನಿಸುತ್ತದೆ, ಸ್ವಯಂ-ಗ್ರಹಿತ ಲಿಂಗ ಗುರುತಿನ ನಿಬಂಧನೆಯನ್ನು ತೆಗೆದುಹಾಕುತ್ತದೆ ಮತ್ತು ಹಲವಾರು ಸಾಮಾಜಿಕ-ಸಾಂಸ್ಕೃತಿಕ ಗುರುತುಗಳನ್ನು ಮತ್ತು ಟ್ರಾನ್ಸ್ ಮ್ಯಾಸ್ಕ್ಯುಲಿನ್ ವ್ಯಕ್ತಿಗಳನ್ನು ಅದರ ವ್ಯಾಪ್ತಿಯಿಂದ ಹೊರಗಿಡುತ್ತದೆ.

*********

ಅಮೆರಿಕ ಮೂಲದ ಡೇಟಾ ಅನಾಲಿಟಿಕ್ಸ್ ಸಂಸ್ಥೆ ಮಾರ್ನಿಂಗ್ ಕನ್ಸಲ್ಟ್ ನಡೆಸಿದ ಇತ್ತೀಚಿನ ಜಾಗತಿಕ ಸಮೀಕ್ಷೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಶೇಕಡ ೬೮ ರಷ್ಟು ಅನುಮೋದನೆ ರೇಟಿಂಗ್ ಪಡೆದು ಮತ್ತೊಮ್ಮೆ ವಿಶ್ವದ ಅತ್ಯಂತ ಜನಪ್ರಿಯ ನಾಯಕ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಮಾರ್ಚ್ ೨ ಮತ್ತು ೮ ರ ನಡುವೆ ನಡೆಸಿದ ಸಮೀಕ್ಷೆಯು ಪ್ರಧಾನಿ ಮೋದಿ ಇತರ ಜಾಗತಿಕ ನಾಯಕರಿಗಿಂತ ಗಮನಾರ್ಹ ಮುನ್ನಡೆ ಕಾಯ್ದುಕೊಂಡಿದ್ದಾರೆ ಎಂದು ತೋರಿಸುತ್ತದೆ. ಸ್ವಿಟ್ಜರ್ಲೆಂಡ್ ಅಧ್ಯಕ್ಷ ಗೈ ಪರ್ಮೆಲಿನ್ ಮತ್ತು ದಕ್ಷಿಣ ಕೊರಿಯಾದ ಅಧ್ಯಕ್ಷ ಲೀ ಜೇ-ಮ್ಯುಂಗ್ ಶೇಕಡ ೬೨ ರಷ್ಟು ಅನುಮೋದನೆ ರೇಟಿಂಗ್ ಗಳೊಂದಿಗೆ ಎರಡನೇ ಸ್ಥಾನದಲ್ಲಿದ್ದಾರೆ. ಜೆಕ್ ರಿಪಬ್ಲಿಕ್ ಮತ್ತು ಅರ್ಜೆಂಟೀನಾದ ನಾಯಕರು ಕ್ರಮವಾಗಿ ಶೇಕಡ ೫೭ ಮತ್ತು ಶೇಕಡ ೫೬ ರಷ್ಟು ರೇಟಿಂಗ್ಸ್ ಹೊಂದಿದ್ದಾರೆ. ಅಮೆರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಗೆ ಶೇಕಡ ೩೯ ರೇಟಿಂಗ್ಸ್ ಲಭಿಸಿದೆ.

*********

ದಕ್ಷಿಣ ಏಷ್ಯಾ ಫುಟ್‌ಬಾಲ್ ಫೆಡರೇಶನ್ ವತಿಯಿಂದ ನಡೆಯುತ್ತಿರುವ ೨೦ ವರ್ಷದೊಳಗಿನವರ ಚಾಂಪಿಯನ್‌ಶಿಪ್ ಪಂದ್ಯಾವಳಿಯಲ್ಲಿ, ಭಾರತದ ಪುರುಷರ ತಂಡವು ಇಂದು ಮಾಲೆಯಲ್ಲಿ ಪಾಕಿಸ್ತಾನದ ವಿರುದ್ಧದ ಹೈ-ವೋಲ್ಟೇಜ್ ಪಂದ್ಯದೊಂದಿಗೆ ತನ್ನ ಅಭಿಯಾನವನ್ನು ಪ್ರಾರಂಭಿಸಲಿದೆ.ಪಾಕಿಸ್ತಾನ ಮತ್ತು ಬಾಂಗ್ಲಾದೇಶದೊಂದಿಗೆ 'ಬಿ' ಗುಂಪಿನಲ್ಲಿರುವ ಭಾರತವು ಈ

ಮೂರು ತಂಡಗಳ ಗುಂಪಿನಲ್ಲಿ ಕಠಿಣ ಸವಾಲನ್ನು ಎದುರಿಸುತ್ತಿದೆ. ಇಲ್ಲಿ ಪ್ರತಿ ಅಂಕಗಳು ಕೂಡ ನಿರ್ಣಾಯಕವಾಗಿದೆ. ಭಾರತ ತಂಡವು ತನ್ನ ಎರಡನೇ ಪಂದ್ಯದಲ್ಲಿ ಇದೇ ೨೮ರಂದು ಬಾಂಗ್ಲಾದೇಶವನ್ನು ಎದುರಿಸಲಿದೆ.

*********

೨೦೨೬-೨೭ ರಿಂದ ೨೦೩೫-೩೬ ರವರೆಗಿನ ಹತ್ತು ವರ್ಷಗಳ ಅವಧಿಗೆ ಒಟ್ಟು ೨೮ ಸಾವಿರದ ೮೪೦ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಪ್ರಾದೇಶಿಕ ಸಂಪರ್ಕ ಯೋಜನೆ - ಮಾರ್ಪಡಿಸಿದ ಉಡಾನ್ ಅನ್ನು ಪ್ರಾರಂಭಿಸಲು ಮತ್ತು ಅನುಷ್ಠಾನಗೊಳಿಸಲು ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ. ಸಂಪುಟ ನಿರ್ಧಾರಗಳ ಬಗ್ಗೆ ಮಾಧ್ಯಮಗಳಿಗೆ ಮಾಹಿತಿ ನೀಡಿದ ವಾರ್ತಾ ಮತ್ತು ಪ್ರಸಾರ ಖಾತೆಸಚಿವ ಅಶ್ವಿನಿ ವೈಷ್ಣವ್, ಪ್ರಾದೇಶಿಕ ಸಂಪರ್ಕವನ್ನು ಹೆಚ್ಚಿಸಲು ೧೦೦ ವಿಮಾನ ನಿಲ್ದಾಣಗಳನ್ನು ಬಳಕೆಯಲ್ಲಿಲ್ಲದ ಏರ್ ಸ್ಟ್ರಿಪ್ ಗಳಿಂದ ಅಭಿವೃದ್ಧಿಪಡಿಸಲಾಗುವುದು ಎಂದು ಹೇಳಿದರು.

***END****